ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

ಚುಕ್ಕೆ ರಹಿತ ಪ್ರಶ್ನೆ

ದಿನಾಂಕ : 31-03-2021 ಪ್ರಶ್ನೆ ಸಂಖ್ಯೆ : 3003 (2535)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಅರವಿಂದಕುಮಾರ್ ಅರಳಿ(ವಿಧಾನಸಭೆಯಿಂದ ಚುನಾಯಿತರಾದವರು)

ಉತ್ತರ ನೀಡಬೇಕಾದ ದಿನಾಂಕ : 31-03-2021

ಉತ್ತರಿಸುವ ಸಚಿವರು: ಮುಜರಾಯಿ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು

ವಿಷಯ : ಬೀದರ್ ಜಿಲ್ಲೆಯಲ್ಲಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಲ್ಲಿ ವಿವಿಧ ಯೋಜನೆಗಳ ಕುರಿತು

(ಅ) ಬೀದರ್ ಜಿಲ್ಲೆಯಲ್ಲಿ ಡಿ. ದೇವರಾಜ ಅರಸು ಭವನ ನಿರ್ಮಾಣಕ್ಕೆ ಮೀಸಲಿಟ್ಟ ಅನುದಾನ ಎಷ್ಟು; (ವಿವರವಾದ ಮಾಹಿತಿ ನೀಡುವುದು)

(ಆ) ಜಿಲ್ಲೆಯಲ್ಲಿ ಖಾಸಗಿ ಹಿಂದುಳಿದ ವಸತಿ ನಿಲಯಗಳು ಎಷ್ಟು; ಹಾಗೂ ಈ ವಸತಿ ನಿಲಯಗಳಿಗೆ ಎಷ್ಟು ಅನುದಾನ ನೀಡಲಾಗಿದೆ;

(ಇ) ಜಿಲ್ಲೆಯಲ್ಲಿ ಅಲೆಮಾರಿ/ಅರೆ ಅಲೆಮಾರಿ ಜನಾಂಗದವರಿಗೆ ಅಭಿವೃದ್ಧಿ ಮಂಡಳಿಯಿಂದ ಮೂಲ ಸೌಕರ್ಯಕ್ಕಾಗಿ ಬಿಡುಗಡೆಯಾದ ಅನುದಾನ ಎಷ್ಟು ; (ತಾಲ್ಲೂಕುವಾರು ವಿವರ ನೀಡುವುದು)

(ಈ) ಜಿಲ್ಲೆಯಲ್ಲಿ ಅಲೆಮಾರಿ/ಅರೆ ಅಲೆಮಾರಿ ಜನಾಂಗದವರಿಗೆ ಅರಿವು ಮೂಡಿಸಲು ಹಮ್ಮಿಕೊಂಡಿರುವ ಕಾಯಕ್ರಮಗಳು ಯಾವುವು; (ವಿವರವಾದ ಮಾಹಿತಿ ನೀಡುವುದು)

(ಉ) 2018-19 ರಿಂದ 2020-21ರವರೆಗೆ ಇಲಾಖೆಯ ಅಧೀನದಲ್ಲಿ ಬರುವ ವಿವಿಧ ನಿಗಮ ಮಂಡಳಿಗಳು ಯಾವುವು? (ತಾಲ್ಲೂಕುವಾರು ಆಯ್ಕೆ ಪಟ್ಟಿ, ಫಲಾನುಭವಿಗಳ ಪ್ರಗತಿ ಮಾಹಿತಿಯೊಂದಿಗೆ ವಿವರ ನೀಡುವುದು)